# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 972 |
| ಉತ್ತರಿಸಬೇಕಾದ ದಿನಾಂಕ | : 20.08.2025 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : ಶ್ರೀ ಐವಾನ್ ಡಿ 'ಸೋಜಾ ( ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಮಾನ್ಯ ವಸತಿ, ವಕ್ಫ್, ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಕ್ರೈಸ್ತ ಸಮುದಾಯದ ವಿದ್ಯಾರ್ಥಿಗಳು ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯಲು 500 ಯೂನಿವರ್ಸಿಟಿಗಳ Rank ಇದ್ದರೆ ಮಾತ್ರ ಅವರಿಗೆ ವಿದ್ಯಾರ್ಥಿವೇತನ ನೀಡಲಾಗುವುದು ಎಂಬ ನಿಯಮದಿಂದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದ್ದು ಸರ್ಕಾರ ಈ ನಿಯಮವನ್ನು ತೆಗೆದುಹಾಕಲು ಇರುವ ತೊಂದರೆಗಳೇನು; (ವಿವರ ನೀಡುವುದು) | ವಿಶ್ವದ ಪ್ರತಿಷ್ಠಿತ QS top 500 Universities ಪಟ್ಟಿಯಲ್ಲಿ ಸ್ಥಾನ ಪಡೆಯುವ ವಿಶ್ವ ವಿದ್ಯಾಲಯಗಳು ಜಾಗತಿಕ ಮಟ್ಟದಲ್ಲಿ ಖ್ಯಾತಿ, ಮನ್ನಣೆ ಪಡೆದಿರುವುದರಿಂದ ಹಾಗೂ ವಿಶ್ವ ದರ್ಜೆಯ ಅಧ್ಯಾಪಕರನ್ನು ಹೊಂದಿರುವುದರಿಂದ ಉತ್ತಮ ಗುಣಮಟ್ಟದ ಶಿಕ್ಷಣ, ಸಂಶೋಧನೆ ಹಾಗೂ ನಾವಿನ್ಯತೆ ಅವಕಾಶಗಳು ಹೊಂದಿರುತ್ತವೆ. ಇದರಿಂದ ಸ್ಪರ್ಧಾತ್ಮಕ ವಾತವರಣ ಹೊಂದಿ ಹೆಚ್ಚಿನ ಅವಕಾಶಗಳು/ಸಂಬಳದ ಪ್ಯಾಕೇಜ್ ನೊಂದಿಗೆ ಉತ್ತಮ ಉದ್ಯೋಗ ಅವಕಾಶಗಳನ್ನು ಹೊಂದಿರುತ್ತವೆ.<br><br>ಆದುದರಿಂದ, ಕರ್ನಾಟಕ ಕ್ರೈಸ್ತ ಸಮುದಾಯದ ವಿದ್ಯಾರ್ಥಿಗಳು ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯಲು ಸರ್ಕಾರದ ಆದೇಶ ಸಂಖ್ಯೆ:MWD-MDS/357/2025, ದಿನಾಂಕ:17.06.2025ರಲ್ಲಿ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ವಿದೇಶಿ ವಿದ್ಯಾರ್ಥಿವೇತನವನ್ನು ನೀಡಲು QS world Universities ಪಟ್ಟಿಯಲ್ಲಿನ Top 500 Ranking ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. |
| ಆ) | ಕ್ಯೂ ಆರ್ Rank 500 ಯೂನಿವರ್ಸಿಟಿಗಳು ಅಧಿಕ ಶುಲ್ಕವನ್ನು ವಿಧಿಸುತ್ತಿರುವುದರಿಂದ ವಿದ್ಯಾರ್ಥಿಗಳ ಪೋಷಕರಿಗೆ ಹೊರೆಯಾಗುತ್ತಿದ್ದು, ಈ ಬಗ್ಗೆ ಸರ್ಕಾರ ತನಿಖೆ ನಡೆಸಿದೆಯೇ; 2021-22, 2022-23, 2023-24 ಮತ್ತು 2024-25ರಲ್ಲಿ ಎಷ್ಟು ಮಂದಿ ಕ್ರೈಸ್ತ ಅಭ್ಯರ್ಥಿಗಳಿಗೆ ವಿದೇಶದಲ್ಲಿ ಕಲಿಯಲು ವಿದ್ಯಾರ್ಥಿವೇತನ ನೀಡಲಾಗಿದೆ; ಎಷ್ಟು ಮಂದಿಗೆ ಸಾಲ ನೀಡಲಾಗಿದೆ; (ವಿವರ ನೀಡುವುದು) | QS Top 500 University ಗಳು ಅಧಿಕ ಶುಲ್ಕವನ್ನು ವಿಧಿಸುತ್ತಿರುವುದರಿಂದ ವಿದ್ಯಾರ್ಥಿಗಳ ಪೋಷಕರಿಗೆ ಹೊರೆಯಾಗುತ್ತಿರುವ ಹಿನ್ನೆಲೆಯಲ್ಲಿ 2025-26ನೇ ಸಾಲಿನಿಂದ ಜಾರಿಗೆ ಬರುವಂತೆ ವಿದೇಶಿ ವಿದ್ಯಾರ್ಥಿವೇತನ ಯೋಜನೆಯಡಿ ಈ ಹಿಂದೆ ನೀಡಲಾಗುತ್ತಿದ್ದ ವಿದ್ಯಾರ್ಥಿವೇತನವನ್ನು ರೂ.20.00 ಲಕ್ಷಗಳಿಂದ ರೂ.30.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ.<br><br>2021-22, 2022-23, 2023-24, 2024-25 ರಲ್ಲಿ, ವಿದೇಶದಲ್ಲಿ ಪ್ರವೇಶ ಪಡೆದಿರುವ ಕ್ರೈಸ್ತ ಸಮುದಾಯದ ವಿದ್ಯಾರ್ಥಿಗಳಿಗೆ ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಈ ಕೆಳಕಂಡಂತೆ ವಿದ್ಯಾರ್ಥಿವೇತನವನ್ನು ಪಾವತಿಸಲಾಗಿರುತ್ತದೆ.<br>(ರೂ.ಗಳಲ್ಲಿ)<br>ವರ್ಷ / ಭೌತಿಕ / ಆರ್ಥಿಕ<br>2021-22 / 2 / 20,00,000<br>2022-23 / 17 / 1,65,00,000<br>2023-24 / 102 / 9,35,14,641<br>2024-25 / 176 / 16,57,71,977<br>ಮುಂದುವರೆದು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ವಿದೇಶದಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ 2023-24ನೇ ಸಾಲಿನಿಂದ ವಿದೇಶಿ ವಿದ್ಯಾಭ್ಯಾಸ ಸಾಲ ಯೋಜನೆಯಡಿ ಸಾಲ ಸೌಲಭ್ಯವನ್ನು ಒದಗಿಸಲಾಗುತ್ತಿದೆ.<br><br>ಈ ಯೋಜನೆಯಡಿ 2023-24 ನೇ ಸಾಲಿನಲ್ಲಿ ಒಟ್ಟು 25 ಹಾಗೂ 2024-25ನೇ ಸಾಲಿನಲ್ಲಿ ಒಟ್ಟು 21 ಕ್ರೈಸ್ತ ವಿದ್ಯಾರ್ಥಿಗಳಿಗೆ ವಿದೇಶಿ ವಿದ್ಯಾಭ್ಯಾಸ ಸಾಲಸೌಲಭ್ಯವನ್ನು ನೀಡಲಾಗಿದೆ. |

| | | |
|---|---|---|
| ಇ) | ರಾಜ್ಯ ಸರ್ಕಾರವು 250 ಕೋಟಿ ಕ್ರೈಸ್ತ ಸಮುದಾಯದ ಅಭಿವೃದ್ಧಿಗಾಗಿ ಅನುದಾನ ನೀಡಿದ್ದು, ಈ ಅನುದಾನದಿಂದ ವಿದೇಶದಲ್ಲಿ ಶಿಕ್ಷಣ ಪಡೆಯಲು ನೀಡುವ ವಿದ್ಯಾರ್ಥಿವೇತನ ನೀಡಲು ಸರ್ಕಾರ ಕ್ರಮವಹಿಸುವುದೇ? (ಈ ಬಗ್ಗೆ ವಿವರ ನೀಡುವುದು) | 2025-26ನೇ ಸಾಲಿನ ಆಯವ್ಯಯದಲ್ಲಿ ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗಾಗಿ ರೂ.250.00 ಕೋಟಿಗಳ ಅನುದಾನವನ್ನು ಘೋಷಿಸಿದ್ದು, ಪ್ರಸಕ್ತ ಸಾಲಿಗೆ ರೂ.85.00 ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ. ಈ ಅನುದಾನದಿಂದ ವಿದ್ಯಾರ್ಥಿಗಳಿಗೆ ವಿದೇಶದಲ್ಲಿ ಶಿಕ್ಷಣ ಪಡೆಯಲು ಗರಿಷ್ಠ ರೂ.30.00ಲಕ್ಷಗಳ ವರೆಗೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದೆ.<br><br>ಅದರಂತೆ, ಕ್ರಿಶ್ಚಿಯನ್ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ಮಾನ್ಯತೆ ಪಡೆದಿರುವ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಪದವಿ ಮತ್ತು ಸ್ನಾತಕೋತ್ತರ ವ್ಯಾಸಂಗ ಮಾಡಲು ಅನುಕೂಲವಾಗುವಂತೆ ಪ್ರತಿ ವಿದ್ಯಾರ್ಥಿಗೆ ರೂ.20.00 ಲಕ್ಷದವರೆಗೆ ಸಾಲ ಸೌಲಭ್ಯ ನೀಡಲಾಗುವುದು. |
| ಈ | ಸರ್ಕಾರವು ಕ್ರೈಸ್ತ ಸಮುದಾಯದ ಅಭಿವೃದ್ಧಿ ಮತ್ತು ಬೆಳವಣಿಗಾಗಿ ಪ್ರತ್ಯೇಕವಾಗಿ ಕ್ರೈಸ್ತ ಕಲ್ಯಾಣ ಇಲಾಖೆಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ; ಈ ಬಗ್ಗೆ ಸರ್ಕಾರ ಶಿಫಾರಸ್ಸು ಮಾಡುವುದೇ; (ವಿವರ ನೀಡುವುದು) | ಅನ್ವಯಿಸುವುದಿಲ್ಲ. |
| ಉ | ಕ್ರೈಸ್ತ ಸಮುದಾಯದ ಅಭಿವೃದ್ಧಿಗಾಗಿ 2023-24, 2024-25ರಲ್ಲಿ ಬಿಡುಗಡೆಯಾದ ಅನುದಾನ ಎಷ್ಟು? | ಕ್ರೈಸ್ತ ಸಮುದಾಯದ ಅಭಿವೃದ್ಧಿಗಾಗಿ 2023-24, 2024-25ರಲ್ಲಿ ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತಿದೆ. |

| ವರ್ಷ | ಬಿಡುಗಡೆಯಾದ ಅನುದಾನ (ರೂ. ಕೋಟಿಗಳಲ್ಲಿ) |
|---|---|
| 2023-24 | 75.00 |
| 2024-25 | 85.00 |

**ಸಂಖ್ಯೆ**: MWD-LMQ/176/2025

**(ಬಿ. ಜೆಡ್. ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು